ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಯಲಹಂಕ ವಿಧಾನ ಸಭಾ ವ್ಯಾಪ್ತಿಯಲ್ಲಿ ಬರುವ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನಿಂದ ಆರೋಮ ಬೇಕರಿ ಜಂಕ್ಷನ್ 3ನೇ 'ಎ' ಕ್ರಾಸ್ ರಸ್ತೆ, 1ನೇ 'ಎ' ಮುಖ್ಯರಸ್ತೆ, 16ನೇ 'ಬಿ' ಕ್ರಾಸ್ ರಸ್ತೆಯವರೆಗೆ ವೈಟ್ ಟಾಪಿಂಗ್ ಜೊತೆಗೆ ಅಭಿವೃದ್ಧಿ ಕಾಮಗಾರಿ (1975 ಮೀಟರ್‌ಗಳು) ಕಾಮಗಾರಿಗಳನ್ನು ಜಿ.ಎಸ್.ಟಿ. ಸಮೇತ ರೂ.13.93 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪೈ 2018, ದಿನಾಂಕ: 20-09-2019.
2. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಬಿಬಿಎಂಪಿ /ಆಯುಕ್ತರು /ಪಿ.ಆರ್ /ಪಿಎಸ್‌ಆರ್(ಜಿ) /9300 /2019-20, ದಿನಾಂಕ: 18-12-2019.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ(1) ರಲ್ಲಿ ಓದಲಾದ ದಿನಾಂಕ: 20-09-2019 ರ ಆದೇಶದಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 2018-19ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿ, ಒದಗಿಸಿರುವ ಅನುದಾನದಲ್ಲಿ ಕೈಗೊಳ್ಳಲು ಉದ್ದೇಶಿಸಿ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪೈ 2018, ದಿನಾಂಕ: 02-01-2019 ರಂತೆ ಅನುಮೋದಿಸಿದ್ದ "ಮುಖ್ಯ ಮಂತ್ರಿಗಳ ನವ ಬೆಂಗಳೂರು" ಯೋಜನೆಯನ್ನು ರದ್ದುಪಡಿಸಿ, ಪರ್ಯಾಯವಾಗಿ "ಮುಖ್ಯ ಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ಕೈಗೊಳ್ಳುವ ಕಾಮಗಾರಿಗಳ ರೂ.8015.37 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆಗೆ ಅನುಮೋದನೆ ನೀಡಲಾಗಿದೆ. ಸದರಿ ಆದೇಶದ ಕ್ರಮ ಸಂಖ್ಯೆ: F ರಲ್ಲಿ ಮೇಲಿನಂತೆ ರೂ.8015.37 ಕೋಟಿಗಳ ಮುಖ್ಯ ಮಂತ್ರಿಗಳ ನವ ನಗರೋತ್ಥಾನ ಕ್ರಿಯಾಯೋಜನೆಗೆ ಹೆಚ್ಚುವರಿಯಾಗಿ ಕ್ರಮ ಸಂಖ್ಯೆ:2ರಲ್ಲಿ ರೂ. 50.00 ಕೋಟಿಗಳ ವೆಚ್ಚದಲ್ಲಿ ವೈಟ್ ಟಾಪಿಂಗ್ ಯೋಜನೆಯ ಅಂದಾಜುಪಟ್ಟಿಗಳನ್ನು ಪರಿಷ್ಕರಿಸಿ, ಆಯ್ದ ಕೆಲ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲು ಮತ್ತು ಸಂಬಂದಪಟ್ಟ ಮೊತ್ತವನ್ನು ವೆಚ್ಚ ಮಾಡಲು ಅನುಮೋದನೆ ನೀಡಲಾಗಿದೆ.

ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ದಿನಾಂಕ: 18-12-2019ರ ಬಿಬಿಎಂಪಿ ಆಯುಕ್ತರ ಪ್ರಸ್ತಾವನೆಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪೈ 2018, ದಿನಾಂಕ: 20-09-2019 ರ ಆದೇಶದಲ್ಲಿ ಒಟ್ಟು 12 ವಿವಿಧ ಕ್ರಿಯಾ ಯೋಜನೆಗಳಿಗೆ ಒಟ್ಟು ಮೊತ್ತ ರೂ. 8015.37 ಕೋಟಿಗಳ ಅನುದಾನ ನೀಡಲಾಗಿರುತ್ತದೆ. ಮಾನ್ಯ ಶಾಸಕರು, ಯಲಹಂಕ ವಿಧಾನಸಭಾ ಕ್ಷೇತ್ರ ಮತ್ತು ಮಾನ್ಯ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿರವರು ಯಲಹಂಕ ವಿಧಾನಸಭಾ ವ್ಯಾಪ್ತಿಯಲ್ಲಿ ಬರುವ ಶೇಷಾದ್ರಿಪುರಂ ಕಾಲೇಜಿನಿಂದ ಆರೋಮ ಬೇಕರಿ ಜಂಕ್ಷನ್ 3ನೇ "ಎ" ಕ್ರಾಸ್, 1ನೇ "ಎ" ಮುಖ್ಯರಸ್ತೆ, 16ನೇ "ಬಿ" ಕ್ರಾಸ್ ರಸ್ತೆಯವರೆಗೆ ವೈಟ್ ಟಾಪಿಂಗ್ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎಸ್‌ಪೈ 2018, ದಿನಾಂಕ: 20-09-2019 ರ ಆದೇಶದಂತೆ ನೀಡಿರುವ ಕ್ರಿಯಾ ಯೋಜನೆಯ ಕ್ರಮ ಸಂಖ್ಯೆ: F(2)ರ ಅಡಿಯಲ್ಲಿ ವೈಟ್ ಟಾಪಿಂಗ್ ಯೋಜನೆಯ

...2/-

Scanned by TapScanner

ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ ಆಯ್ದ ಕೆಲ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಳಿಗೆ ನಿಗಧಿಪಡಿಸಿ 50.00 ಕೋಟಿಗಳಲ್ಲಿ, ಈಗಾಗಲೇ ಪಾಲಿಕೆ ವತಿಯಿಂದ ರೂ. 20.72 ಕೋಟಿಗಳಿಗೆ ಸರ್ಕಾರದ ಆದೇಶ ಜಾಬ್ ಕೋಡ್ ನೀಡಲಾಗಿದ್ದು, ಉಳಿಕೆ ರೂ. 29.28 ಕೋಟಿಗಳ ಅನುದಾನ ಲಭ್ಯವಿರುತ್ತದೆ ಎಂದು ತಿಳಿಸಿರುತ್ತಾರೆ.

ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಇವರು, ಸಾರ್ವಜನಿಕ ಹಿತದೃಷ್ಟಿಯಿಂದ ವಾಹನಗಳ ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸಲು, ಯಲಹಂಕ ವಿಧಾನಸಭಾ ವ್ಯಾಪ್ತಿಯಲ್ಲಿ ಶೇಷಾದ್ರಿಪುರಂ ಕಾಲೇಜಿನಿಂದ ಆರೋಮ ಬೇಕರಿ ಜಂಕ್ಷನ್ 3ನೇ "ಎ" ಕ್ರಾಸ್, 1ನೇ "ಎ" ಮುಖ್ಯರಸ್ತೆ 16ನೇ ಕ್ರಾಸ್ ರಸ್ತೆಯವರೆಗೆ ವೈಟ್ ಟಾಪಿಂಗ್ ಜೊತೆಗೆ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲು ಈ ಕೆಳಕಂಡ ಯೋಜನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

Sl. No.	Items	Amount Rs.	Amount (Rs. In Crores)
1	Carriageway Improvements	4,29,31,250.45	4.29
2	Traffic Signs, Markings and Other Road Appurtenances	12,85,314.82	0.13
3	Utility ducts, Utility Lines, Power Cross Over Chambers, Sewer Chamber	2,64,36,136.61	2.64
4	Rain Water Harvesting	13,67,591.30	0.14
5	Roadside Drain	2,60,47,400.42	2.60
6	Kerb and Footpath improvement	1,76,96,565.47	1.77
7	Dismantling Work	42,00,375.45	0.42
	Construction Cost Rs.	11,99,64,634.52	12.00
	Maintenance cost (2.5% of Construction Cost)	29,99,115.86	0.30
	Amount put to tender	12,29,63,750.38	12.30
	GST Components (12%)	1,47,55,650.35	1.48
	DPR PMC Charges @1% of Construction Cost	11,99,646.35	0.12
	Quality Control @ 0.25% of Construction Cost	2,99,911.59	0.03
	Rounding off	81,041.64	-
	Total Project Cost Rs.	13,93,00,000.00	13.93

ಆದುದರಿಂದ, ಮುಖ್ಯ ಅಭಿಯಂತರರು (ಯಲಹಂಕ ವಲಯ) ರವರು ಶಿಫಾರಸ್ಸು ಮಾಡಿರುವಂತೆ, White topping of road from Sheshadripuram First Grade College to Aroma Bakery Junction via 3rd A Cross road, 1st A Main road, 16th B cross road ಕಾಮಗಾರಿಯನ್ನು ಮುಖ್ಯಮಂತ್ರಿಗಳ ನವನಗರೋತ್ಥಾನ ಯೋಜನೆ ಅಡಿ ನಿಗಧಿಪಡಿಸಿರುವ ರೂ. 50.00 ಕೋಟಿಗಳ ಅನುದಾನದಲ್ಲಿ

...3/-

Scanned by TapScanner

ಕೈಗೊಳ್ಳಲು ಸದರಿ ಕಾಮಗಾರಿಯ ಕ್ರಿಯಾ ಯೋಜನೆಗೆ ಅನುಮೋದನೆ ಮತ್ತು ಅಂದಾಜು ಪಟ್ಟಿ ರೂ. 13.93 ಕೋಟಿಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಬಿಬಿಎಂಪಿ ಆಯುಕ್ತರು ಕೋರಿರುತ್ತಾರೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಆಯುಕ್ತರ ಪ್ರಸ್ತಾವನೆಯನ್ನು ಕೂಲಕಂಷವಾಗಿ ಪರಿಶೀಲಿಸಿದ ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

ಸರ್ಕಾರಿ ಆದೇಶ ಸಂಖ್ಯೆ: ನಅಇ 263 ಎಂಎನ್‌ಪೈ 2019,
ಬೆಂಗಳೂರು, ದಿನಾಂಕ: 08-01-2020.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ಪೈ 2018, ದಿನಾಂಕ: 20-09-2019 ರ "ಮುಖ್ಯಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ರೂ.8015.37 ಕೋಟಿಗಳ ಅಂದಾಜು ಮೊತ್ತದ ಕ್ರಿಯಾಯೋಜನೆಯಲ್ಲಿ ಅನುಮೋದಿಸಲಾಗಿರುವ, "ವೈಟ್ ಟಾಪಿಂಗ್ ಅಂದಾಜು ಪಟ್ಟಿಗಳನ್ನು ಪರಿಷ್ಕರಿಸಿ, ಆಯ್ದ ಕೆಲ ರಸ್ತೆಗಳ ವೈಟ್ ಟಾಪಿಂಗ್ ಕಾಮಗಾರಿಗಳಿಗೆ ನಿಗಧಿಪಡಿಸಿರುವ ರೂ. 50.00 ಕೋಟಿಗಳ ಅನುದಾನದ ಪೈಕಿ, "Whitetopping of Road from Sheshadripuram First Grade College to Aroma Bakery Junction via 3rd Cross Road 1st A Main Road, 16th B Cross Road" ಕಾಮಗಾರಿಯನ್ನು ಪ್ರತಿ ಕಿ.ಮೀ.ಗೆ ರೂ.7.05ಕೋಟಿಯಂತೆ, ರೂ.13.93 (ರೂ. ಹದಿಮೂರು ಕೋಟಿ ತೊಂಬತ್ತಮೂರು ಲಕ್ಷಗಳು ಮಾತ್ರ) ಕೋಟಿಗಳ ಅಂದಾಜು ವೆಚ್ಚದಲ್ಲಿ, ಕಾಮಗಾರಿಯನ್ನು ಕೈಗೊಳ್ಳಲು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಕ್ರಿಯಾ ಯೋಜನೆಗೆ ಅನುಮೋದನೆ ನೀಡಿದೆ.

1. ಮೇಲಿನ ಕಾಮಗಾರಿಯನ್ನು ಮುಖ್ಯ ಅಭಿಯಂತರರು, ಯಲಹಂಕ ವಲಯ ರವರು ಅಂದಾಜುಗಳನ್ನು ತಾಂತ್ರಿಕವಾಗಿ ಪರಿಶೀಲಿಸಿ ಅನುಮೋದಿಸುವುದು.
2. ಸದರಿ ಅಂದಾಜು ಪಟ್ಟಿಗಳನ್ನು ಬಿಬಿಎಂಪಿಯ ತಾಂತ್ರಿಕ ಸಲಹಾ ಸಮಿತಿಯ ಮುಂದೆ ಮಂಡಿಸಿ ಕಡ್ಡಾಯವಾಗಿ ತೀರುವಳಿ ಮಾಡಿಕೊಂಡ ನಂತರ ಟೆಂಡರ್ ಕರೆದು ಯೋಜನೆಯನ್ನು ಅನುಷ್ಠಾನಗೊಳಿಸುವುದು.
3. ವೈಟ್ ಟಾಪಿಂಗ್ ಕಾಮಗಾರಿಯ ಅನುಷ್ಠಾನದಲ್ಲಿ ನುರಿತ ಅಭಿಯಂತರರನ್ನು ಕಾಮಗಾರಿಯ ಉಸ್ತುವಾರಿಗೆ ನೇಮಿಸುವುದು.
4. ಅಂದಾಜಿನಲ್ಲಿ ಅಗತ್ಯವಿರುವ ಎಲ್ಲಾ ಮೂಲಸೌಕರ್ಯ ಸ್ಥಳಾಂತರ, ಹೊಸ ಮೂಲಸೌಕರ್ಯ ಡಕ್ಟ್‌ಗಳ ಸ್ಥಾಪನೆ, ಕ್ರಾಸ್ ಡಕ್ಟ್ ಅಳವಡಿಕೆ ಮುಂತಾದವುಗಳನ್ನು ಸೇರಿಸಿ ಭವಿಷ್ಯದಲ್ಲಿ ರಸ್ತೆ ಅಗೆತಗೊಳಿಸುವ ಯಾವುದೇ ಸಂಭವವಿಲ್ಲದಂತೆ ನೋಡಿಕೊಳ್ಳತಕ್ಕದ್ದು, ಕಾಮಗಾರಿಯ ಅಂದಾಜಿನಲ್ಲಿ guidelines of IRC: SP 76-2015 ನ್ನು ಕಡ್ಡಾಯವಾಗಿ ಅಳವಡಿಸಿಕೊಳ್ಳಬೇಕಿರುತ್ತದೆ
5. ಬಿಬಿಎಂಪಿಯ ಪ್ರಧಾನ ಅಭಿಯಂತರರು, ಸದರಿ ಕಾಮಗಾರಿಗಳ ಅನುಷ್ಠಾನದಲ್ಲಿ ಗುಣಮಟ್ಟ ನಿಯಂತ್ರಣಕ್ಕೆ ಬಿಬಿಎಂಪಿಯ ಗುಣಮಟ್ಟ ನಿಯಂತ್ರಣ ವಿಭಾಗ, ಪಿ.ಎಂ.ಸಿ ಮತ್ತು ಥರ್ಡ್ ಪಾರ್ಟಿ ಗುಣ ನಿಯಂತ್ರಕರನ್ನು ನೇಮಿಸಿ, ಸೂಕ್ತ ನಿಯಮಾವಳಿಗಳನ್ನು ರೂಪಿಸಿ ಕ್ರಮ ವಹಿಸುವುದು ಮತ್ತು ಗುಣಮಟ್ಟ ನಿಯಂತ್ರಣದ ಮೇಲುಸ್ತುವಾರಿಯನ್ನು ಕಡ್ಡಾಯವಾಗಿ ನಿರ್ವಹಿಸುವುದು.
6. ಮೇಲಿನ ಕಾಮಗಾರಿಯನ್ನು ಕೆ.ಟಿ.ಪಿ.ಪಿ. ಕಾಯ್ದೆ/ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಪಾಲಿಸಿಕೊಂಡು ಅನುಷ್ಠಾನಗೊಳಿಸುವುದು.

...4/-

Scanned by TapScanner

7. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
8. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರ "ಮುಖ್ಯ ಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ಮೀಸಲಿಟ್ಟ ನಗರೋತ್ಥಾನ ಯೋಜನೆಯ ಅನುದಾನದಿಂದ ಭರಿಸುವುದು ಮತ್ತು ಹೆಚ್ಚುವರಿ ಪ್ರೀಮಿಯಂ ಅನ್ನು ಬಿ.ಬಿ.ಎಂ.ಪಿ.ಯ ಅನುದಾನದಿಂದ ಭರಿಸುವುದು.
9. ಕಾಮಗಾರಿಯ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದೆಯೇ ವಿನಃ ಟೆಂಡರ್‌ಗೆ ಅನುಮೋದನೆ ಎಂದು ಭಾವಿಸತಕ್ಕದ್ದಲ್ಲ. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರಲ್ಲಿ ತಿಳಿಸಿರುವಂತೆ ಆಡಳಿತಾತ್ಮಕ ಅನುಮೋದನೆ ಮತ್ತು ಟೆಂಡರ್‌ಗೆ ಸಕ್ಷಮ ಪ್ರಾಧಿಕಾರಗಳ ಅನುಮೋದನೆ ಪಡೆಯತಕ್ಕದ್ದು.
10. ಸರ್ಕಾರದ ಆದೇಶ ಸಂಖ್ಯೆ: ನಅಇ 375 ಎಂಎನ್‌ವೈ 2018, ದಿನಾಂಕ: 20-09-2019 ರ "ಮುಖ್ಯ ಮಂತ್ರಿಗಳ ನವ ನಗರೋತ್ಥಾನ" ಯೋಜನೆಯಡಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀ ಸಾಗರ ಎಸ್.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1. ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3. ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5. ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6. ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
7. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 3 ಮತ್ತು 9), ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ.
10. ಸರ್ಕಾರದ ಉಪ ಕಾರ್ಯದರ್ಶಿಗಳು-3 ರವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ.
11. ಕಾರ್ಯಪಾಲಕ ಅಭಿಯಂತರರು (ತಾಂತ್ರಿಕ ಕೋಶ), ನಗರಾಭಿವೃದ್ಧಿ ಇಲಾಖೆ.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪೂರ್ಣಗೊಳಿಸಿದೆ
ದಿನಾಂಕ: 8/1/2020

Scanned by TapScanner